**All India Radio: Bangalore**
**National Bulletins In Kannada**
**24.05.2025 / 19.35 hrs**

ಆಕಾಶವಾಣಿ, ಬೆಂಗಳೂರು

ರಾಷ್ಟ್ರೀಯ ವಾರ್ತೆಗಳು

**24.05.2025 / 19.35 hrs**

**<><*<><>*><>**

ಮುಖ್ಯಾಂಶಗಳು

೧. ಪ್ರತಿ ರಾಜ್ಯದಲ್ಲೂ ಮೂಲಸೌಕರ್ಯ ಒದಗಿಸಿ ಕನಿಷ್ಠ ಒಂದು ಪ್ರವಾಸಿ ತಾಣವನ್ನು ಅಭಿವೃದ್ಧಿಪಡಿಸುವಂತೆ ರಾಜ್ಯಗಳಿಗೆ ಪ್ರಧಾನಿ ಕರೆ

೨. 'ಮನ್ ಕಿ ಬಾತ್' ನ ೧೨೨ನೇ ಆವೃತ್ತಿಯಲ್ಲಿ ನಾಳೆ ಪ್ರಧಾನಿ ನರೇಂದ್ರ ಮೋದಿ ಮನದಾಳದ ಮಾತು

೩. ಎಂಟು ದಿನ ಮುಂಚಿತವಾಗಿ ನೈಋತ್ಯ ಮುಂಗಾರು ಕೇರಳ ಪ್ರವೇಶ; ಕರ್ನಾಟಕ ಕರಾವಳಿ, ಮಲೆನಾಡು ಜಿಲ್ಲೆಗಳಲ್ಲಿ ಮೇ ೩೦ ರವರೆಗೆ ಭಾರೀ ಮಳೆ ಸಾಧ್ಯತೆ; ರೆಡ್ ಅಲರ್ಟ್ ಘೋಷಣೆ

೪. ಈಶಾನ್ಯ ರಾಜ್ಯಗಳಲ್ಲಿ ಉದಯೋನ್ಮುಖ ಕ್ರೀಡಾ ಪ್ರತಿಭೆಗಳನ್ನು ಪ್ರೋತ್ಸಾಹಿಸಲು ಭವಿಷ್ಯದಲ್ಲಿ ಖೇಲೋ ಇಂಡಿಯಾ ಈಶಾನ್ಯ ಕ್ರೀಡಾಕೂಟ ಆಯೋಜನೆ - ಕೇಂದ್ರ ಸಚಿವ ಮನ್ಸೂಖ್ ಮಾಂಡವೀಯ

೫. ಇಂಗ್ಲೆಂಡ್ ಪ್ರವಾಸಕ್ಕೆ ಭಾರತದ ಟೆಸ್ಟ್ ತಂಡ ಪ್ರಕಟ; ಶುಭ್‌ಮನ್‌ಗಿಲ್ ನಾಯಕತ್ವದಲ್ಲಿ ಕರ್ನಾಟಕದ ಮೂವರಿಗೆ ಸ್ಥಾನ

**<><*<><>*><>**

ಜಾಗತಿಕ ಮಾನದಂಡಗಳಿಗೆ ಅನುಗುಣವಾಗಿ ಪ್ರತಿ ರಾಜ್ಯಕ್ಕೂ ಕನಿಷ್ಠ ಒಂದು ಪ್ರವಾಸಿ ತಾಣವನ್ನು ಅಭಿವೃದ್ಧಿಪಡಿಸಲು ಮತ್ತು ಎಲ್ಲಾ ಸೌಲಭ್ಯಗಳು ಮತ್ತು ಮೂಲಸೌಕರ್ಯಗಳನ್ನು ಒದಗಿಸುವಂತೆ ಪ್ರಧಾನಿ ನರೇಂದ್ರ ಮೋದಿ ರಾಜ್ಯಗಳನ್ನು ಕರೆ ನೀಡಿದ್ದಾರೆ. ನವದೆಹಲಿಯಲ್ಲಿಂದು ನಡೆದ ನೀತಿ ಆಯೋಗದ ಹತ್ತನೇ ಆಡಳಿತ ಮಂಡಳಿ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಪ್ರಧಾನಿ, "ಒಂದು ರಾಜ್ಯ ಒಂದು ಜಾಗತಿಕ ತಾಣ" ದ ಬಗ್ಗೆ ಒತ್ತಿ ಹೇಳುತ್ತಾ, ಇದು ನೆರೆಯ ನಗರಗಳನ್ನು ಪ್ರವಾಸಿ ಸ್ಥಳಗಳಾಗಿ ಅಭಿವೃದ್ಧಿಪಡಿಸಲು ಮುಖ್ಯ ಕಾರಣವಾಗುತ್ತದೆ. ಭಾರತ ವೇಗವಾಗಿ ನಗರೀಕರಣಗೊಳ್ಳುತ್ತಿದ್ದು, ಬೆಳವಣಿಗೆ, ನಾವೀನ್ಯತೆ ಮತ್ತು ಸುಸ್ಥಿರತೆಯು ನಗರಗಳ ಅಭಿವೃದ್ಧಿಗೆ ಚಾಲನಾಶಕ್ತಿಯಾಗಿರಬೇಕು ಎಂದು ಹೇಳಿದರು. ಕೇಂದ್ರ ಮತ್ತು ಎಲ್ಲಾ ರಾಜ್ಯಗಳು ಒಟ್ಟಾಗಿ ಒಂದು ಟೀಮ್ ಇಂಡಿಯಾದಂತೆ ಕೆಲಸ ಮಾಡಿದರೆ, ಯಾವುದೇ ಗುರಿ ಅಸಾಧ್ಯವಲ್ಲ. ಅಭಿವೃದ್ಧಿಯ ವೇಗವನ್ನು ಮತ್ತಷ್ಟು ಹೆಚ್ಚಿಸುವ ಅಗತ್ಯವಿದೆ ಎಂದು ಪ್ರಧಾನಿ ಒತ್ತಿ ಹೇಳಿದರು. 'ವಿಕಸಿತ ಭಾರತ' ಪ್ರತಿಯೊಬ್ಬ ಭಾರತೀಯನ ಗುರಿಯಾಗಿದೆ. ಪ್ರತಿ ರಾಜ್ಯವೂ ವಿಕಸಿತವಾಗಿದ್ದರೆ, ಭಾರತವು ವಿಕಸಿತವಾಗಿರುತ್ತದೆ. ಮಹಿಳೆಯರನ್ನು ಕಾರ್ಯಪಡೆಯಲ್ಲಿ ಸೇರಿಸಿಕೊಳ್ಳುವತ್ತ ಎಲ್ಲರೂ ಕೆಲಸ ಮಾಡಬೇಕು. "ಮಹಿಳೆಯರನ್ನು ಕಾರ್ಯಪಡೆಯಲ್ಲಿ ಗೌರವಯುತವಾಗಿ ಸಂಯೋಜಿಸಲು ಕಾನೂನುಗಳು ಮತ್ತು ನೀತಿಗಳನ್ನು ರೂಪಿಸಬೇಕು ಎಂದು ಅವರು ಹೇಳಿದರು.

**<><*<><>*><>**

ಆಕಾಶವಾಣಿಯ ಜನಪ್ರಿಯ ಮಾಸಿಕ ಮನ್ ಕಿ ಬಾತ್‌ನಲ್ಲಿ ಪ್ರಧಾನಮಂತ್ರಿ ನರೇಂದ್ರ ಮೋದಿ ಅವರು, ನಾಳೆ ಬೆಳಗ್ಗೆ ೧೧ ಗಂಟೆಗೆ ದೇಶ-ವಿದೇಶಗಳಲ್ಲಿರುವ ಭಾರತೀಯ ಸಮುದಾಯದೊಂದಿಗೆ ತಮ್ಮ ಮನದಾಳದ ಮಾತುಗಳನ್ನು ಹಂಚಿಕೊಳ್ಳಲಿದ್ದಾರೆ. ಇದು 'ಮನ್ ಕಿ ಬಾತ್' ಕಾರ್ಯಕ್ರಮದ ೧೨೨ನೇ ಆವೃತ್ತಿಯಾಗಿದೆ. ಈ ಕಾರ್ಯಕ್ರಮ ಆಕಾಶವಾಣಿ ಮತ್ತು ದೂರದರ್ಶನದ ಎಲ್ಲ ವಾಹಿನಿಗಳು, ಎಐಆರ್ ನ್ಯೂಸ್ ಜಾಲತಾಣ, ನ್ಯೂಸ್ ಆನ್ ಏರ್ ಮೊಬೈಲ್ ಆಪ್‌ನಲ್ಲಿ ಪ್ರಸಾರವಾಗಲಿದೆ. ಹಿಂದಿ ಅವತರಣಿಕೆಯ ನಂತರ ಪ್ರಾದೇಶಿಕ ಭಾಷೆಗಳಲ್ಲಿ ನೀವು ಈ ಕಾರ್ಯಕ್ರಮವನ್ನು ಕೇಳಬಹುದು.

**<><*<><>*><>**

ಪ್ರಧಾನಿ ನರೇಂದ್ರ ಮೋದಿ ಅವರು, ಇದೇ ೨೬ ಮತ್ತು ೨೭ ರಂದು ತಮ್ಮ ತವರು ರಾಜ್ಯ ಗುಜರಾತ್‌ಗೆ ಭೇಟಿ ನೀಡಲಿದ್ದು, ಇದೇ ೨೬ರಂದು ಪ್ರಧಾನಿ ಬೃಹತ್ ರೋಡ್ ಶೋನಲ್ಲಿ ಭಾಗಿಯಾಗಲಿದ್ದಾರೆ. ಆಪರೇಷನ್ 'ಸಿಂದೂರ' ನಂತರ ಪ್ರಧಾನಿ ಮೋದಿ ಅವರು ಗುಜರಾತ್‌ಗೆ ನೀಡುತ್ತಿರುವ ಮೊದಲ ಭೇಟಿ ಇದಾಗಿದೆ. ಪ್ರಧಾನಿ, ಗುಜರಾತ್‌ನ ಮೂರು ಪ್ರಮುಖ ಜಿಲ್ಲೆಗಳಾದ ದಾಹೋಡ್, ಕಛ್ ಮತ್ತು ಗಾಂಧಿನಗರಕ್ಕೆ ಭೇಟಿ ನೀಡಲಿದ್ದು, ಸಾರ್ವಜನಿಕ-ಖಾಸಗಿ ಪಾಲುದಾರಿಕೆ - ಪಿಪಿಪಿ ಮಾದರಿಯಡಿಯಲ್ಲಿ ಹೈ-ಪವರ್ ಎಲೆಕ್ಟ್ರಿಕ್ ಲೋಕೋಮೋಟಿವ್‌ಗಳನ್ನು ತಯಾರಿಸುವ ಗುರಿಯನ್ನು ಹೊಂದಿರುವ ಹೆಗ್ಗುರುತು ರೈಲ್ವೆ ಯೋಜನೆಯ ಪ್ರಗತಿಯನ್ನು ಪರಿಶೀಲಿಸಲಿದ್ದಾರೆ.

**<><*<><>*><>**

ಈಶಾನ್ಯ ಪ್ರದೇಶದಲ್ಲಿ ಉದಯೋನ್ಮುಖ ಕ್ರೀಡಾ ಪ್ರತಿಭೆಗಳನ್ನು ಪ್ರೋತ್ಸಾಹಿಸಲು ಭವಿಷ್ಯದಲ್ಲಿ ಖೇಲೋ ಇಂಡಿಯಾ ಈಶಾನ್ಯ ಕ್ರೀಡಾಕೂಟವನ್ನು ಪ್ರಾರಂಭಿಸಲಾಗುವುದು ಎಂದು ಕೇಂದ್ರ ಯುವ ವ್ಯವಹಾರಗಳು ಮತ್ತು ಕ್ರೀಡಾ ಸಚಿವ ಡಾ.ಮನ್ಸುಖ್ ಮಾಂಡವಿಯಾ ಹೇಳಿದ್ದಾರೆ. ನವದೆಹಲಿಯಲ್ಲಿಂದು ನಡೆದ ಉದಯೋನ್ಮುಖ ಈಶಾನ್ಯ ಹೂಡಿಕೆದಾರರ ಶೃಂಗಸಭೆ ೨೦೨೫ ರ ಸಂದರ್ಭದಲ್ಲಿ ನಡೆದ ಅಧಿವೇಶನವನ್ನುದ್ದೇಶಿಸಿ ಮಾತನಾಡಿದ ಸಚಿವರು, ಈ ಕ್ರೀಡಾಕೂಟವು ಪ್ರತಿ ವರ್ಷವೂ ನಡೆಯಲಿದೆ. ಒಲಿಂಪಿಕ್ಸ್ ಕ್ರೀಡೆಗಳನ್ನು ಮಾತ್ರವಲ್ಲದೆ ಸಾಂಪ್ರದಾಯಿಕ ಕ್ರೀಡೆಗಳನ್ನು ಸಹ ಒಳಗೊಳ್ಳಲಿದೆ ಎಂದು ತಿಳಿಸಿದ್ದಾರೆ. ಖೇಲೋ ಇಂಡಿಯಾ ಕ್ರೀಡಾಕೂಟವನ್ನು ಶ್ಲಾಘಿಸಿದ ಕ್ರೀಡಾ ಸಚಿವರು, ಮುಂದಿನ ೧೦ ವರ್ಷಗಳಲ್ಲಿ ಒಲಿಂಪಿಕ್ಸ್‌ನಲ್ಲಿ ಅಗ್ರ ೧೦ ರಾಷ್ಟ್ರಗಳಲ್ಲಿ ಒಂದಾಗುವ ಮತ್ತು ಮುಂದಿನ ೨೫ ವರ್ಷಗಳಲ್ಲಿ ಅಗ್ರ ೫ ರಾಷ್ಟ್ರಗಳಲ್ಲಿ ಒಂದಾಗುವ ಗುರಿಯನ್ನು ತಲುಪಲು ಭಾರತಕ್ಕೆ ಇದು ಮಾರ್ಗವಾಗಿಲಿದೆ ಎಂದು ತಿಳಿಸಿದಾರೆ. ೨೦೩೦ ರ ಕಾಮನ್‌ವೆಲ್ತ್ ಕ್ರೀಡಾಕೂಟ ಮತ್ತು ೨೦೩೬ ರ ಒಲಿಂಪಿಕ್ಸ್ ಅನ್ನು ಆಯೋಜಿಸಲು ಭಾರತವು ತನ್ನ ಬಿಡ್ ಅನ್ನು ಸಿದ್ಧಪಡಿಸುವ ಪ್ರಕ್ರಿಯೆಯನ್ನು ಪ್ರಾರಂಭಿಸಿದೆ. ಭವಿಷ್ಯದಲ್ಲಿ ಭಾರತ, ಇತರ ಹಲವು ಅಂತಾರಾಷ್ಟ್ರೀಯ ಪಂದ್ಯಾವಳಿಗಳನ್ನು ಆಯೋಜಿಸಲಿದೆ ಎಂದು ಅವರು ಭರವಸೆ ನೀಡಿದರು.

**<><*<><>*><>**

ನೈಋತ್ಯ ಮುಂಗಾರು ಎಂಟು ದಿನಗಳ ಮುಂಚಿತವಾಗಿ ಕೇರಳವನ್ನು ಪ್ರವೇಶಿಸಿದೆ. ಸಾಮಾನ್ಯವಾಗಿ ಜೂನ್ ೧ ರಂದು ಪ್ರಾರಂಭವಾಗುವ ಮುಂಗಾರು ಇಂದು ಕೇರಳದಲ್ಲಿ ಕಾಣಿಸಿಕೊಂಡಿದೆ ಎಂದು ಹವಾಮಾನ ಇಲಾಖೆ ದೃಢಪಡಿಸಿದೆ. ೨೦೦೯ ರಲ್ಲಿ, ನೈಋತ್ಯ ಮುಂಗಾರು ಮೇ ೨೩ ರಂದು ಕೇರಳದಲ್ಲಿ ಪ್ರವೇಶಿಸಿತ್ತು ಮತ್ತು ೧೯೯೦ ರಲ್ಲಿ ಮೇ ೧೯ ರಂದು ಕಾಣಿಸಿಕೊಂಡಿತ್ತು. ಈ ವರ್ಷವೂ ಸಹ ಮುಂಗಾರು ಸಾಮಾನ್ಯ ಸಮಯಕ್ಕಿಂತ ಮುಂಚಿತವಾಗಿಯೇ ಪ್ರಾರಂಭವಾಗಿದೆ. ನೈಋತ್ಯ ಮುಂಗಾರು, ಈಗ ಕರ್ನಾಟಕದ ಕಾರವಾರ, ಶಿವಮೊಗ್ಗ, ಹಾಸನ ಮತ್ತು ಮೈಸೂರು ಮೂಲಕ ಮತ್ತು ತಮಿಳುನಾಡಿನ ಧರ್ಮಪುರಿ ಮತ್ತು ಚೆನ್ನೈ ಮೂಲಕ ಹಾದುಹೋಗುತ್ತಿದೆ ಎಂದು ಹವಾಮಾನ ವರದಿ ಹೇಳುತ್ತದೆ. ಕರಾವಳಿ ಕರ್ನಾಟಕ ಮತ್ತು ಪಶ್ಚಿಮ ಘಟ್ಟ ಜಿಲ್ಲೆಗಳಾದ ಉತ್ತರ ಕನ್ನಡ, ಕೊಡಗು,

ಶಿವಮೊಗ್ಗ, ಚಿಕ್ಕಮಗಳೂರು ಮತ್ತು ಹಾಸನದಲ್ಲಿ ಮೇ ೩೦ ರವರೆಗೆ ಭಾರೀ ಮಳೆಯಾಗುವ ಸಾಧ್ಯತೆಯಿದ್ದು, ರೆಡ್ ಅಲರ್ಟ್ ಘೋಷಿಸಲಾಗಿದೆ ಎಂದು ಹವಾಮಾನ ಇಲಾಖೆ ತಿಳಿಸಿದೆ. ಉತ್ತರ ಕರ್ನಾಟಕದ ಬೆಳಗಾವಿ, ಧಾರವಾಡ, ಹಾವೇರಿ ಜಿಲ್ಲೆಗಳಿಗೆ ಆರೆಂಜ್ ಅಲರ್ಟ್ ನೀಡಲಾಗಿದ್ದು, ಬೆಂಗಳೂರು ಮತ್ತು ಸುತ್ತಮುತ್ತಲಿನ ಪ್ರದೇಶಗಳಿಗೆ ಯಲ್ಲೋ ಅಲರ್ಟ್ ನೀಡಲಾಗಿದೆ. ಕರಾವಳಿ ಕರ್ನಾಟಕದಲ್ಲಿ ಬಲವಾದ ಗಾಳಿ ಮತ್ತು ಸಾಧಾರಣ ಮಳೆಯೊಂದಿಗೆ ಕಪ್ಪು ಮೋಡಗಳು ಆವರಿಸಿವೆ. ಜಿಲ್ಲಾಡಳಿತಗಳು ವಿಪತ್ತು ಮತ್ತು ಮಳೆಯಿಂದ ಉಂಟಾಗುವ ರೋಗಗಳಿಗೆ ಸಹ ಸಿದ್ಧತೆ ನಡೆಸುತ್ತಿವೆ. ಪ್ರವಾಹ ಮತ್ತು ಭೂಕುಸಿತಕ್ಕೆ ಒಳಗಾಗುವ ಜಿಲ್ಲೆಗಳು ತಡೆಗಟ್ಟುವ ಸೂಕ್ತ ಕ್ರಮಗಳನ್ನು ಕೈಗೊಂಡಿವೆ. ಡೆಂಘಿ ಮತ್ತು ಮಲೇರಿಯಾ ಕುರಿತು ಆರೋಗ್ಯ ಇಲಾಖೆ ಎಚ್ಚರಿಸಿದೆ.

<><*<><>*><>

ಹಜ್ ಯಾತ್ರೆ ಕೈಗೊಂಡ ಭಾರತೀಯರು, ಸೌದಿ ಅರೇಬಿಯಾದಲ್ಲಿ ಎಲ್ಲರಿಗೂ ಸುಗಮ ಪ್ರಯಾಣವನ್ನು ಖಚಿತಪಡಿಸಿಕೊಳ್ಳಲು ಭಾರತ ಸರ್ಕಾರವು ನೀಡುವ ವ್ಯವಸ್ಥೆಗಳ ಮತ್ತು ಸೌಲಭ್ಯಗಳ ಗುಣಮಟ್ಟವನ್ನು ಶ್ಲಾಘಿಸಿದ್ದಾರೆ. ಅಲ್ಪಸಂಖ್ಯಾತ ವ್ಯವಹಾರಗಳ ಸಚಿವಾಲಯ ಸಾಮಾಜಿಕ ಜಾಲತಾಣದಲ್ಲಿ, ಪ್ರತಿಯೊಬ್ಬ ಹಜ್ ಯಾತ್ರಿಕರಿಗೂ ಆರಾಮದಾಯಕ ಮತ್ತು ಗೌರವಾನ್ವಿತ ಪ್ರಯಾಣವನ್ನು ಖಚಿತಪಡಿಸಿಕೊಳ್ಳುವುದು ಸಚಿವಾಲಯದ ನಿರಂತರ ಪ್ರಯತ್ನವಾಗಿದೆ ಎಂದು ತಿಳಿಸಿದೆ. ಅಲ್ಪಸಂಖ್ಯಾತ ವ್ಯವಹಾರಗಳ ಖಾತೆ ರಾಜ್ಯ ಸಚಿವ ಜಾರ್ಜ್ ಕುರಿಯನ್ ನಿನ್ನೆ ಯಾತ್ರಿಕರಿಗೆ ಸುಗಮ ಮತ್ತು ಯಶಸ್ವಿ ಹಜ್ ಯಾತ್ರೆಯನ್ನು ಖಚಿತಪಡಿಸಿಕೊಳ್ಳುವಲ್ಲಿ ಕೇಂದ್ರದ ಪ್ರಯತ್ನಗಳನ್ನು ಪ್ರಶಂಶಿಸಿದ್ದಾರೆ. ಜೆದ್ದಾದ ಭಾರತೀಯ ಕಾನ್ಸುಲ್ ಜನರಲ್ ಫಹಾದ್ ಅಹ್ಮದ್ ಖಾನ್ ಸೂರಿ ನೇತೃತ್ವದಲ್ಲಿ 'ಟೀಮ್ ಇಂಡಿಯಾ' ಹಜ್ ೨೦೨೫ ಅನ್ನು ನಿಯೋಜಿಸಲಾಗಿದೆ. ಯಾವುದೇ ಆರೋಗ್ಯ ಸಮಸ್ಯೆಗಳಿಗೆ ವೈದ್ಯರು, ದಾದಿಯರು ಮತ್ತು ಆಂಬ್ಯುಲೆನ್ಸ್‌ಗಳು ದಿನದ ೨೪ ಗಂಟೆಯೂ ಲಭ್ಯವಿರುತ್ತವೆ.

<><*<><>*><>

ಜಾರ್ಖಂಡ್‌ನ ಲತೇಹಾರ್ ಜಿಲ್ಲೆಯ ಸಲೈಯಾ ಅರಣ್ಯದ ಬಳಿ ನಿನ್ನೆ ರಾತ್ರಿ ಪೊಲೀಸರೊಂದಿಗೆ ನಡೆದ ಕಾರ್ಯಾಚರಣೆಯಲ್ಲಿ ಮಾವೋವಾದಿ ಪಪ್ಪು ಲೋಹರಾ ಸೇರಿದಂತೆ ಮೂವರು ನಕ್ಸಲರು ಹತರಾಗಿದ್ದಾರೆ. ಲೋಹರಾ, ನಕ್ಸಲೀಯ ಸಂಘಟನೆಯ ಜಾರ್ಖಂಡ್ ಜನಮುಕ್ತಿ ಪರಿಷತ್-ಜೆಜೆಎಂಪಿ ನ ಮುಖ್ಯಸ್ಥನಾಗಿದ್ದನು. ಸರ್ಕಾರ ಆವರ ತಲೆಗೆ ೧೦ ಲಕ್ಷ ರೂಪಾಯಿ ನಗದು ಬಹುಮಾನ ಘೋಷಿಸಿತ್ತು. ಏತನ್ಮಧ್ಯೆ, ಬೊಕಾರೊ ವಲಯದ ಪೊಲೀಸ್ ಇನ್‌ಸ್ಪೆಕ್ಟರ್ ಜನರಲ್ ಮೈಕೆಲ್ ರಾಜ್, ರಾಜ್ಯದಲ್ಲಿ ಈಗ ಕೆಲವೇ ನಕ್ಸಲೀಯರು ಉಳಿದಿದ್ದಾರೆ ಎಂದು ಹೇಳಿದ್ದಾರೆ.

<><*<><>*><>

ಗುಜರಾತ್‌ನ ಬನಸ್ಕಂತ್ ಜಿಲ್ಲೆಯಲ್ಲಿ ಅಂತಾರಾಷ್ಟ್ರೀಯ ಗಡಿ ದಾಟಿ ಭಾರತಕ್ಕೆ ಪ್ರವೇಶಿಸಲು ಯತ್ನಿಸಿದ ಪಾಕಿಸ್ತಾನದ ನುಸುಳುಕೋರನೊಬ್ಬನನ್ನು ಗಡಿ ಭದ್ರತಾ ಪಡೆ - ಬಿಎಸ್‌ಎಫ್ ಗುಂಡಿಕ್ಕಿ ಹತ್ಯೆ ಮಾಡುವಲ್ಲಿ ಯಶಸ್ವಿಯಾಗಿದೆ. ಅಂತಾರಾಷ್ಟ್ರೀಯ ಗಡಿ ದಾಟಿ ಅನುಮಾನಾಸ್ಪದವಾಗಿ ಭಾರತದೊಳಗೆ ನುಸುಳಿದ ವ್ಯಕ್ತಿಯನ್ನು ಗಮನಿಸಿದ ಭದ್ರತಾಪಡೆ, ಒಳನುಸುಳುಕೋರನಿಗೆ ಎಚ್ಚರಿಕೆ ನೀಡಿದರೂ, ಆತ ಮುಂದುವರಿದು ಭಾರತದತ್ತ ನುಸುಳಲು ಯತ್ನಿಸಿದ ಹಿನ್ನೆಲೆಯಲ್ಲಿ ಆತನ ಮೇಲೆ ಗುಂಡು ಹಾರಿಸಿದೆ ಎಂದು ವರದಿಯಾಗಿದೆ.

<><*<><>*><>

ಭಾರತ ಕ್ರಿಕೆಟ್ ನಿಯಂತ್ರಣ ಮಂಡಳಿ-ಬಿಸಿಸಿಐ, ಇಂದು ಇಂಗ್ಲೆಂಡ್ ವಿರುದ್ಧದ ಮುಂಬರುವ ಟೆಸ್ಟ್ ಸರಣಿಗೆ ಭಾರತ ತಂಡವನ್ನು ಪ್ರಕಟಿಸಿದೆ. ಶುಭಮನ್ ಗಿಲ್ ಅವರನ್ನು ಟೀಮ್ ಇಂಡಿಯಾದ ಟೆಸ್ಟ್ ಕ್ರಿಕೆಟ್ ನಾಯಕರನ್ನಾಗಿ ಆಯ್ಕೆ ಮಾಡಲಾಗಿದ್ದು, ರಿಷಭ್ ಪಂತ್ ಅವರನ್ನು ಉಪನಾಯಕರನ್ನಾಗಿ ಆಯ್ಕೆ ಮಾಡಲಾಗಿದೆ. ಕನ್ನಡಿಗರಾದ ಕೆ. ಎಲ್.ರಾಹುಲ್, ಕರುಣ್ ನಾಯರ್, ಪ್ರಸಿದ್ಧ್ ಕೃಷ್ಣ ತಂಡದಲ್ಲಿ ಸ್ಥಾನ ಪಡೆದಿದ್ದಾರೆ. ವಿಕೆಟ್ ಕೀಪರ್ ಧ್ರುವ್ ಜುರೆಲ್ ಅವರಾದರೆ, ಉಳಿದಂತೆ ಯಶಸ್ವಿ ಜೈಸ್ವಾಲ್, ಸಾಯಿ ಸುದಶನ್, ಅಭಿಮನ್ಯು ಈಷ್ವರನ್, ನಿತಿಶ್ ಕುಮಾರ್ ರೆಡ್ಡಿ, ರವೀಂದ್ರ ಜಡೇಜ, ವಾಷಿಂಗ್ಟನ್ ಸುಂದರ್, ಶರ್ದುಲ್ ಠಾಕುರ್, ಜಸ್ಪ್ರಿತ್ ಬುಮ್ರ, ಮೊಹಮದ್ ಶಿರಾಜ್, ಆಕಾಶ್ ದೀಪ್, ಅರ್ಶ್ ದೀಪ್ ಸಿಂಗ್ ಹಾಗು ಕುಲ್ದೀಪ್ ಸಿಂಗ್ ಟೆಸ್ಟ್ ತಂಡದ ಇತರ ಆಟಗಾರರು. ವಿರಾಟ್ ಕೊಹ್ಲಿ ಮತ್ತು ರೋಹಿತ್ ಶರ್ಮಾ ಅವರ ಟೆಸ್ಟ್ ನಿವೃತ್ತಿಯ ನಂತರ ಭಾರತಕ್ಕೆ ಹೊಸ ಯುಗ ಪ್ರಾರಂಭವಾಗುವ ನಿರೀಕ್ಷೆಯಿದೆ.

**<><*<> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು <>*><>**

**<><*<> ನಮ್ಮ ಮುಂದಿನ ವಾರ್ತಾ ಪ್ರಸಾರ ನಾಳೆ ಬೆಳಗ್ಗೆ ೭.೦೫ ಕ್ಕೆ <>*><>**